**2ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ - 3499/2021**
**ಚಾಸಾ - 07/** ಪ್ರಾಸಾ **- 05**

| | |
|---|---|
| ಹೆಸರು | **ರಾಜೇಗೌಡ** |
| ತಂದೆಯ ಹೆಸರು | **ಚನ್ನೇಗೌಡ** |
| ವಯಸ್ಸು | **63** |
| ಉದ್ಯೋಗ | **ನಿವೃತ್ತ ಎ. ಎಸ್. ಐ** |
| ವಿಳಾಸ | **ವಾಜರ ಹಳ್ಳಿ** |

**ದಿನಾಂಕ:27-11-2025 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ-**

ನಾನು ದಿ.01-08-2016 ರಿಂದ ದಿ.31-05-2022 ವರೆಗೆ ತಾವರೆಕೆರೆ ಪೋಲೀಸ್ ಠಾಣೆಯಲ್ಲಿ ಎ. ಎಸ್. ಐ ಯಾಗಿ ಕಾರ್ಯನಿರ್ವಹಿಸಿದ್ದೇನೆ.

ದಿನಾಂಕ 17-08-2021 ರಂದು ಸಂಜೆ 5.30 ಗಂಟೆಯ ಸಮಯದಲ್ಲಿ ಪಿರ್ಯಾದುದಾರರು ಠಾಣೆಗೆ ಹಾಜರಾಗಿ ದೂರನ್ನು ನೀಡಿದ ಮೇರೆಗೆ ಠಾಣಾ ಮೊಕದ್ದಮೆ ನಂ.278/2021 ಎಂದು ನಮೂದಿಸಲಾಯಿತು. ಸದರಿ ಮೊಕದ್ದಮೆ ನಂ. ಕಲಂ 323, 324, 327, 354 ಸಹವಾಚಕ 34 ಐ.ಪಿ.ಸಿ ರೀತ್ಯ ಪ್ರಕರಣ ದಾಖಲು ಮಾಡಲಾಯಿತು. ಈಗ ಸಾಕ್ಷಿಗೆ ನಿಪಿ-1ನ್ನು ದೂರನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸದರಿ ದೂರಿನ ಮೇರೆಗೆ ಪ್ರಥಮ ವರ್ತಮಾನ ವರದಿಯನ್ನು ಮಾಡಲಾಯಿತು. ಈಗ ಸಾಕ್ಷಿಗೆ ಪ್ರಥಮ ವರ್ತಮಾನ ವರದಿಯನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಪ್ರಥಮ ವರ್ತಮಾನ ವರದಿಯನ್ನು ನಿಪಿ-4 ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

ದಿ. 18-08-2021 ರಂದು ಪಂಚನಾಮೆಗೆ ಸಾಕ್ಷಿದಾರರಾಗಿ ಸಹಕರಿಸುವತಂ಼ ಚಾಸಾ-1, 4 ಮತ್ತು 5ರವರಿಗೆ ನೋಟಿಸ್ ನ್ನು ನೀಡಿರುತ್ತೇನೆ ಈಗ ಸಾಕ್ಷಿಗೆ ನಿಪಿ-3ನ್ನು ದೂರನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-3(ಸಿ) ಎಂದು ಗುರುತಿಸಲಾಯಿತು. ಅದೇ ದಿನ ಬೆಳಗ್ಗೆ 10.30 ರಿಂದ 11.15ರವರೆಗೆ ಚಾಸಾ-1ರವರು ತೋರಿಸಿದ ಜಾಗದಲ್ಲಿ ನಿಪಿ-2ರಂತೆ

ಪಂಚನಾಮೆಯನ್ನು ಚಾಸಾ-1, 4 ಮತ್ತು 5ರವರ ಸಹಿಯನ್ನು ಪಡೆದಕೊಂಡಿರುತ್ತೇನೆ. ಈಗ ಸಾಕ್ಷಿಗೆ ನಿಪಿ-02 ಅನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಒಂದು ದೊಣ್ಣೆಯನ್ನು ವಶಪಡಿಸಿಕೊಂಡು ಮಾಲುಪಟ್ಟಿ ಸಂ. 145/2021 ರಂತೆ ದಾಖಲು ಮಾಡಲಾಯಿತು. ಈಗ ಸಾಕ್ಷಿಗೆ ಮುದ್ದೆ ಮಾಲೂ1ನ್ನು ತೋರಿಸಿದ್ದು, ಅದನ್ನು ಪಂಚನಾಮೆ ಮಾಡುವ ಸಮಯದಲ್ಲಿ ವಶಪಡಿಸಿಕೊಳ್ಳಲಾಗಿದೆ. ಈಗ ಸಾಕ್ಷಿಗೆ ಮಾಲುಪಟ್ಟಿಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಮಾಲುಪಟ್ಟಿಯನ್ನು ನಿಪಿ-5 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ಒಂದು ಫೋಟೋವನ್ನು ತೋರಿಸಿದ್ದು, ಅದರಲ್ಲಿ ಇರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಫೋಟೋವನ್ನು ನಿಪಿ-6 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

ಅದೇ ದಿನದಂದು ಚಾಸಾ-1ರವರ ಮುಂದುವರೆದ ಹೇಳಿಕೆ ಮತ್ತು ಚಾಸಾ-2 ಮತ್ತು 3ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಈಗ ಸಾಕ್ಷಿಗೆ ಚಾಸಾ-1ರವರ ಮುಂದುವರೆದ ಹೇಳಿಕೆ ಮತ್ತು ಚಾಸಾ-2 ಮತ್ತು 3ರವರ ಹೇಳಿಕೆಗಳನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಹೇಳಿಕೆಗಳನ್ನು ನಿಪಿ-7 ರಿಂದ 9 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-7(ಎ) , ನಿಪಿ-8(ಎ) ಮತ್ತು ನಿಪಿ-9(ಎ) ಎಂದು ಗುರುತಿಸಲಾಯಿತು.

ದಿ.25-08-2021 ರಂದು ಮಾಗಡಿಯ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿಗೆ ಚಾಸಾ-1 ಮುತ್ತ 2ರವರ ಗಾಯದ ಪ್ರಮಾಣಪತ್ರವನ್ನು ನೀಡುವಂತೆ ಮನವಿ ಮಾಡಿಕೊಂಡಿರುತ್ತೇನೆ. ಈಗ ಸಾಕ್ಷಿಗೆ ಮನವಿ ಪತ್ರವನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಮನವಿ ಪತ್ರವನ್ನು ನಿಪಿ-10 ಎಂದು ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ದಿ.27-08-2021 ರಂದು ಚಾಸಾ1 ಮತ್ತು 2ರವರ ಗಾಯ ಪ್ರಮಾಣಪತ್ರವನ್ನು ಚಾಸಾ-6ರವರಿಂದ ಪಡೆದುಕೊಂಡಿರುತ್ತೇನೆ.

ಈಗ ಸಾಕ್ಷಿಗೆ ಗಾಯದ ಪ್ರಮಾಣ ಪತ್ರವನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಗಾಯದ ಪ್ರಮಾಣಪತ್ರಗಳನ್ನು ನಿಪಿ-11 ಮತ್ತು 12 ಎಂದು ಸಾಕ್ಷಿಯ ಸಹಿಯನ್ನು ನಿಪಿ-11(ಎ) ಮತ್ತು ನಿಪಿ-12(ಎ) ಎಂದು ಗುರುತಿಸಲಾಯಿತು.

ದಿ.01-09-2021 ರಂದು ಚಾಸಾ-1ರವರ ಹೇಳಿಕೆಯನ್ನು ಕಲಂ. 164 ಸಿ. ಆರ್. ಪಿ ಸಿ ರೀತ್ಯ ಮಾಡಿಕೊಡುವಂತೆ ಕೋರಿ ಮಾನ್ಯ ನ್ಯಾಯಾಲಯಕ್ಕೆ ಮನವಿಯನ್ನು ಮಾಡಿಕೊಂಡಿರುತ್ತೇನೆ. ಈಗ ಸಾಕ್ಷಿಗೆ ಮನವಿ ಪತ್ರವನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಮನವಿ ಪತ್ರವನ್ನು ನಿಪಿ-13 ಎಂದು ಸಾಕ್ಷಿಯ ಸಹಿಯನ್ನು ನಿಪಿ-13(ಎ) ಎಂದು ಗುರುತಿಸಲಾಯಿತು. ಅದರಂತೆ ದಿ.27-10-2021 ರಂದು ಚಾಸಾ-1ರವರ ಸದರಿ ಹೇಳಿಕೆಯನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಆರೋಪಿಗಳು ಮಾನ್ಯ 3ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಿಂದ ನಿರೀಕ್ಷಣಾ ಜಮೀನನ್ನು ಪಡೆದು ಠಾಣೆಗೆ ಹಾಜರಾದ ಮೇರೆಗೆ ಅವರನ್ನು ದಸ್ತಗಿರಿ ಮಾಡಿ ಸೂಕ್ತ ಜಾಮೀನಿನ ಮೇರೆಗೆ ಬಿಡುಗಡೆ ಮಾಡಿರುತ್ತೇನೆ. ನಾನು ಆರೋಪಿಗಳನ್ನು ನೋಡಿದರೆ ಗುರುತಿಸುತ್ತೇನೆ. ಇಂದು ನ್ಯಾಯಾಲಯದ ಮುಂದೆ ಆರೋಪಿಗಳು ಹಾಜರಿದ್ದಾರೆ. ದಿ.28-10-2021 ರಂದು ಆರೋಪಿಗಳ ವಿರುದ್ದ ಆರೋಪವು ಸಾಬೀತಾದ ಮೇರೆಗೆ ಆರೋಪಿಗಳ ವಿರುದ್ದ ಮಾನ್ಯ ನ್ಯಾಯಾಲಯಕ್ಕೆ ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

**ಪಾಟೀ ಸವಾಲು- ಆರೋಪಿಗಳ ಪರ ಶ್ರೀ.ಎಂ. ವಿ. ಎಸ್, ವಕೀಲರಿಂದ -**

ನೀವು ಚಾಸಾ-1ರವರಿಂದ ಸುಳ್ಳು ದೂರನ್ನು ಸ್ವೀಕರಿಸಿ ಸುಳ್ಳು ಎಫ್. ಐ. ಆರ್ ನ್ನು ಹಾಕಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಕೃತ್ಯ ನಡೆದ ಸ್ಥಳಕ್ಕೆ ಹೋಗಿಲ್ಲ, ನಿಪಿ-2ರಂತೆ ಪಂಚನಾಮೆಯನ್ನು ಮಾಡಿಲ್ಲ ಮತ್ತು ಆ ಸಮಯದಲ್ಲಿ ಮುದ್ದೆ ಮಾಲು-1ನ್ನು ವಶಪಡಿಸಿಕೊಂಡಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಈಗ ಸಾಕ್ಷಿಗೆ ಮುದ್ದೆ ಮಾಲು-1 ನ್ನು ತೋರಿಸಿದ್ದು, ಅದು ಸುಮಾರು 4 ಅಡಿ ಉದ್ದ ಇರಬಹುದು ಎಂದರೆ ಸಾಕ್ಷಿಯು ಮೂರುವರೆ ಅಡಿ ಉದ್ದ ಇದೆ ಎನ್ನುತ್ತಾರೆ. ಮುದ್ದೆ

ಮಾಲು-1ರ ಮೇಲೆ ನಾನು ಸಾಕ್ಷಿದಾರರ ಸಹಿಯನ್ನು ಪಡೆದುಕೊಂಡಿರುವುದಿಲ್ಲ. ಚಾಸಾ-1ರಿಂದ 3ರವರು ನಿಪಿ-7ರಿಂದ 9ರಂತೆ ನಿಮಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನಾನು ಸಾಕ್ಷಿದಾರರ ರಕ್ತದ ಕಲೆ ಆಗಿರುವ ಬಟ್ಟೆಗಳನ್ನು ವಶಪಡಿಸಿಕೊಂಡಿರುವುದಿಲ್ಲ. ಈಗ ಸಾಕ್ಷಿಗೆ ನಿಪಿ-6ನ್ನು ತೋರಿಸಿದ್ದು, ಅದರಲ್ಲಿ ಚಾಸಾ-1ರವರನ್ನು ಹೊರತುಪಡಿಸಿ ಬೇರೆ ಯಾರೂ ಸಹ ಇರುವುದಿಲ್ಲ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ನೀವು ಸರಿಯಾಗಿ ತನಿಖೆಯನ್ನು ಮಾಡದೇ ಚಾಸಾ-1ರವರಿಗೆ ಸಹಾಯ ಮಾಡುವ ಉದ್ದೇಶದಿಂದ ಆರೋಪಿಗಳ ವಿರುದ್ದ ಯಾವುದೇ ಆರೋಪವು ಸಾಬೀತಾಗದೇ ಇದ್ದರೂ ಸಹ ಸುಳ್ಳು ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯಾ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ,**
ಮಾಗಡಿ.